ಕರ್ನಾಟಕ ಸರ್ಕಾರ

ಸಂ:ಬಿಸಿಡಬ್ಲ್ಯೂ 09 ಬಿಎಂಎಸ್ 2016

ಕರ್ನಾಟಕ ಸರ್ಕಾರದ ಸಚಿವಾಲಯ,
ವಿಕಾಸಸೌಧ,
ಬೆಂಗಳೂರು, ದಿನಾಂಕ: 08.01.2016.

**ತಿದ್ದುಪಡಿ ಆದೇಶ**

ಸರ್ಕಾರಿ ಆದೇಶ ಸಂಖ್ಯೆ: ಬಿಸಿಡಬ್ಲ್ಯೂ 495 ಬಿಎಂಎಸ್ 2015, ದಿನಾಂಕ: 11.06.2015ರ ಅನುಬಂಧದ ಮಾರ್ಗಸೂಚಿಗಳ

1. ಪುಟ ಸಂಖ್ಯೆ1ರಲ್ಲಿನ ಕಂಡಿಕೆ (3)ರ ಉಪಕಂಡಿಕೆ(5)ರಲ್ಲಿ ಪಿ.ಹೆಚ್.ಡಿ ಅಧ್ಯಯನಕ್ಕಾಗಿ ನೋಂದಣಿಯು ವ್ಯಾಸಂಗ ವೇತನ/ಫೆಲೋಶಿಪ್‌ಗಾಗಿ ಅರ್ಜಿ ಸಲ್ಲಿಸುವ ದಿನಾಂಕಕ್ಕೆ ಹಿಂದಿನ 2 ವರ್ಷಗಳೊಳಗಿದ್ದು, ಅರ್ಜಿ ಸಲ್ಲಿಸುವ ಸಾಲಿನಿಂದ ಪ್ರಥಮ ವರ್ಷದ ಪಿ.ಹೆಚ್.ಡಿ ಅಧ್ಯಯನದಲ್ಲಿ ತೊಡಗಿರಬೇಕು **ಎಂಬುದನ್ನು 'ಪೂರ್ಣಾವಧಿ ಪಿ.ಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಿಂದುಳಿದ ವರ್ಗಗಳ ವಿದ್ಯಾರ್ಥಿಗಳಿಗೆ ವ್ಯಾಸಂಗ ವೇತನ/ಫೆಲೋಶಿಪ್ ನೀಡುವುದು'** ಎಂದು ತಿದ್ದಿ ಓದಿಕೊಳ್ಳತಕ್ಕದ್ದು.
2. ಪುಟ ಸಂಖ್ಯೆ2ರಲ್ಲಿನ ಕಂಡಿಕೆ (5)ರ ಉಪಕಂಡಿಕೆ (2)ರಲ್ಲಿ ನಿಗಧಿಪಡಿಸಲಾಗಿರುವ ಈ ಕೆಳಕಂಡ ವಿಷಯವಾರು ಮೀಸಲಾತಿಯನ್ನು ರದ್ದುಪಡಿಸಲಾಗಿದೆ ಎಂದು ಓದಿಕೊಳ್ಳತಕ್ಕದ್ದು.

| ಕ್ರ. ಸಂ. | ವಿಷಯ | ಶೇಕಡವಾರು |
|---|---|---|
| 1 | ಮಾನವಿಕ ವಿಷಯಗಳು, ಭಾಷೆ, ಸಮಾಜ ವಿಜ್ಞಾನ | 30% |
| 2 | ವಿಜ್ಞಾನ ಮತ್ತು ತಂತ್ರಜ್ಞಾನ, ಕೃಷಿ ಮತ್ತು ಸಂಬಂಧಿತ ವಿಜ್ಞಾನ | 30% |
| 3 | ವಾಣಿಜ್ಯ ಮತ್ತು ನಿರ್ವಹಣೆ | 15% |
| 4 | ತಾಂತ್ರಿಕ ಹಾಗೂ ವೈದ್ಯಕೀಯ ವಿಜ್ಞಾನ | 25% |
| | ಒಟ್ಟು | 100% |

3. ಪ್ರವರ್ಗವಾರು ಮೀಸಲಾತಿಯಲ್ಲಿ other OBC ಗೆ 1% **ಮೀಸಲಾತಿಯನ್ನು** ನಿಗದಿಪಡಿಸುವುದು. **ಎಂಬುದನ್ನು** ಈ ಕೆಳಗಿನಂತೆ ಮರು ನಿಗಧಿಪಡಿಸಿದ್ದು, ಅದರಂತೆ ಓದಿಕೊಳ್ಳತಕ್ಕದ್ದು.

| ಕ್ರ. ಸಂ. | ಪ್ರವರ್ಗ | ಶೇಕಡವಾರು |
|---|---|---|
| 1 | 1 | 23% |
| 2 | 2(ಎ) | 46% |
| 3 | 3(ಎ) | 14% |
| 4 | 3(ಬಿ) | 16% |
| 5 | other OBC | 1% |
| | ಒಟ್ಟು | 100 |

....2

ಪೂರ್ಣಾವಧಿ ಪಿ.ಹೆಚ್.ಡಿ ಅಧ್ಯಯನದಲ್ಲಿ ತೊಡಗಿರುವ ಹಾಗೂ ಆನ್–ಲೈನ್‌ನಲ್ಲಿ ಅರ್ಜಿ ಸಲ್ಲಿಸುವ ಅರ್ಹ ವಿದ್ಯಾರ್ಥಿಗಳಿಗೆ ಅನುದಾನ ಲಭ್ಯತೆ, ಮೆರಿಟ್ ಹಾಗೂ ಪ್ರವರ್ಗವಾರು ಮೀಸಲಾತಿಯನ್ವಯ ವ್ಯಾಸಂಗ ವೇತನ/ಫೆಲೋಶಿಪ್ ಪಡೆಯಲು ಅರ್ಹರು ಎಂಬುದಾಗಿ ತಿದ್ದಿ ಓದಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಆರ್.ಭಾಸ್ಕರ್)
ಸರ್ಕಾರದ ಅಧೀನ ಕಾರ್ಯದರ್ಶಿ–2
ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ

ಇವರಿಗೆ:

1. ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.
3. ಆಯುಕ್ತರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
4. ಖಜಾನಾಧಿಕಾರಿಗಳು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ಆಂತರಿಕ, ಆರ್ಥಿಕ ಸಲಹೆಗಾರರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿಕಾಸಸೌಧ, ಬೆಂಗಳೂರು.
7. ಮಾನ್ಯ ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ. ಬೆಂಗಳೂರು.
8. ಸರ್ಕಾರದ ಉಪ ಕಾರ್ಯದರ್ಶಿಗಳು, ಆಪ್ತ ಸಹಾಯಕರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು